<u>ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು, ತರೀಕೆರೆ</u>

**<u>ಸಿ.ಸಿ.390/2025</u>**

<u>ಪಿರ್ಯಾದುದಾರರು</u> ಃ ಸರ್ಕಾರದ ಪರವಾಗಿ ತರೀಕೆರೆ ಪೊಲೀಸರಿಂದ

-ವಿರುದ್ಧ-

<u>ಆರೋಪಿ/ತರು</u> ಃ 1. ರೇಣುಕಾರಾಧ್ಯ ಬಿನ್ ಗುರುನಂಜಪ್ಪ ಹೆಚ್ ಎನ್, 53 ವರ್ಷ, ವಾಸಃಕನ್ನೂರಳ್ಳಿ ಗ್ರಾಮ, ದೊಡ್ಡಗಟ್ಟಿಗನಬ್ಬೆ, ಹೊಸಕೋಟೆ ತಾಲ್ಲೂಕು, ಬೆಂಗಳೂರು ಜಿಲ್ಲೆ.

<u>-ಃಆಪಾದನೆಃ-</u>

ದಿನಾಂಕಃ03.05.2025 ರಂದು ಬೆಳಗಿನ ಜಾವ 4-20 ರ ಸಮಯದಲ್ಲಿ ತರೀಕೆರೆಯಿಂದ ಭದ್ರಾವತಿ ಕಡೆಗೆ ಹೋಗಲು ಠಾಣಾ ಸರಹದ್ದಿನ ಲಕ್ಕವಳ್ಳಿ ಕ್ರಾಸ್ ನ ಬಳಿ ಚಾಸಾ-1 ಮತ್ತು 2 ರವರನ್ನು 2 ನೇ ಆರೋಪಿಯಾದ ನೀವು ನಿಮ್ಮ ಬಾಬ್ತು ಕೆಎ-66/3427 ರ ಬಜಾಜ್ ಮ್ಯಾಕ್ಸಿಮಾ ಕಾರ್ಗೋ ಆಟೋದ ನಿಯಮದ ಪರವಾನಗಿಯನ್ನು ಉಲ್ಲಂಘನೆ ಮಾಡಿ ಚಾಸಾ-2 ಮತ್ತು 3 ರವರನ್ನು ಕೂರಿಸಿಕೊಂಡು ಚಾಲನೆ ಮಾಡಿಕೊಂಡು ಹೋಗುತ್ತಿರುವಾಗ ಭದ್ರಾವತಿ ಕಡೆಯಿಂದ ಬಂದ 1 ನೇ ಆರೋಪಿಯಾದ ನೀವು ನಿಮ್ಮ ಬಾಬ್ತು ಕೆಎ-53/ಎಎ-7774 ರ ಟಿಟಿ ವಾಹನವನ್ನು ಅತೀವೇಗ ಮತ್ತು ಅಜಾಗರೂಕತೆಯಿಂದ ಚಾಲನೆ ಮಾಡಿಕೊಂಡು ಬಂದು ಸದರಿ ಮ್ಯಾಕ್ಸಿಮಾ ಲಗೇಜ್ ಆಟೋಕ್ಕೆ ಮುಂಭಾಗದಿಂದ ಡಿಕ್ಕಿಪಡಿಸಿದ್ದು, ಆ ಮೂಲಕ ನೀವು ಭಾರತೀಯ ನ್ಯಾಯ ಸಂಹಿತೆಯ ಕಲಂ.**281** ರೀತ್ಯಾ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಮಾಡಿರುತ್ತೀರಿ.

ಮೇಲ್ಕಂಡಂತೆ, 1 ನೇ ಆರೋಪಿಯಾದ ನೀವು ಮೇಲೆ ಹೇಳಿದ ವಾಹನವನ್ನು ಮೇಲೆ ಹೇಳಿದ ರೀತಿಯಲ್ಲಿ ಚಾಲನೆ ಮಾಡಿಕೊಂಡು ಬಂದು ಅಪಘಾತಪಡಿಸಿದ ಪರಿಣಾಮ ಚಾಸಾ-1 ರವರ ಮೈಕೈಗೆ ತೀವ್ರ ಸ್ವರೂಪದ ಗಾಯಗಳಾಗಿದ್ದು ಮತ್ತು ಚಾಸಾ-2 ರವರ ಮೈಕೈಗೆ, ಎದೆಗೆ ಸಾಮಾನ್ಯ ಸ್ವರೂಪದ ಗಾಯಗಳಾಗಿದ್ದು ಹಾಗೂ 2 ನೇ ಆರೋಪಿಗೂ ಸಹ ಮೈಕೈಗೆ,

ಕಾಲುಗಳಿಗೆ ತೀವ್ರ ಸ್ವರೂಪದ ಗಾಯಗಳನ್ನುಂಟು ಮಾಡಿದ್ದು, ಆ ಮೂಲಕ ನೀವು ಭಾರತೀಯ ನ್ಯಾಯ ಸಂಹಿತೆಯ ಕಲಂ.**125**(ಎ) ಮತ್ತು (ಬಿ) ರೀತ್ಯಾ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಮಾಡಿರುತ್ತೀರಿ.

ಪ್ರಶ್ನೆ-1 ಈಗ ಓದಿ ಹೇಳಿದ ನಿಮ್ಮ ಮೇಲೆ ಮಾಡಿರುವ ಆರೋಪಗಳು ತಿಳಿಯಿತೆ?

ಉತ್ತರಃ

ಪ್ರಶ್ನೆ-2ಃ ಸದರಿ ಆರೋಪಗಳನ್ನು ಒಪ್ಪಿಕೊಳ್ಳುವಿರೋ ಅಥವಾ ವಿಚಾರಣೆಯಾಗಬೇಕೋ?

ಉತ್ತರಃ

(ಮೇಲ್ಕಂಡ ಆರೋಪಣೆಯನ್ನು ಆರೋಪಿಗೆ ಓದಿ ಹೇಳಿ ವಿವರಿಸಿದ ನಂತರ ಆರೋಪಿ ಕೊಟ್ಟ ಉತ್ತರವನ್ನು ಯಥಾವತ್ತಾಗಿ ಬರೆದುಕೊಳ್ಳಲಾಗಿದೆ.)

ದಿನಾಂಕಃ13.03.2026

Sd/-
ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು, ತರೀಕೆರೆ

ಆರೋಪಿ/ತರ ಸಹಿಃ